# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **62** |
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ವೈ. ಎಂ. ಸತೀಶ್**<br>**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | : | **04.12.2023** |
| **ಉತ್ತರಿಸಬೇಕಾದ ಸಚಿವರು** | : | **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** |

| ಕ್ರ ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಭ್ರೂಣ ಲಿಂಗ ಪತ್ತೆ ಮಾಡುವ ಜಾಲ ಇರುವುದು ನಿಜವೇ; ಹಾಗಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಪತ್ತೆ ಹಚ್ಚಿರುವ ಪ್ರಕರಣಗಳೆಷ್ಟು; ಇದನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು) | ಹೌದು<br><br>ಕಳೆದ ಮೂರು ವರ್ಷಗಳಲ್ಲಿ ಒಟ್ಟು 09 ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದೆ.<br><br>ಕರ್ನಾಟಕ ಸರ್ಕಾರವು ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣ ಲಿಂಗ ಪತ್ತೆ ತಂತ್ರವಿಧಾನಗಳು (ಲಿಂಗ ಆಯ್ಕೆ ನಿಷೇಧ) ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿದ್ದು, ಹೆಣ್ಣು ಭ್ರೂಣ ಹತ್ಯೆ ನಡೆಯದಂತೆ ಈ ಕೆಳಗಿನ ಕ್ರಮ ಕೈಗೊಳ್ಳಲಾಗುತ್ತಿದೆ.<br><br>• ಪಿ.ಸಿ & ಪಿ.ಎನ್.ಡಿ.ಟಿ. ಕಾಯ್ದೆಯಡಿ ಬರುವ ಎಲ್ಲಾ ಶಾಸನ ಬದ್ಧ ಸಮಿತಿಗಳು ರಾಜ್ಯ ಮತ್ತು ಜಿಲ್ಲೆಗಳಲ್ಲಿ ರಚನೆಗೊಂಡಿರುತ್ತವೆ.<br><br>• ರಾಜ್ಯ ಮಟ್ಟದಿಂದ 2022-23 ನೇ ಸಾಲಿನಲ್ಲಿ 18 ಸ್ಕ್ಯಾನಿಂಗ್ ಸೆಂಟರ್‌ಗಳನ್ನು ತಪಾಸಣೆ ನಡೆಸಲಾಗಿದೆ ಹಾಗೂ ಜಿಲ್ಲಾ ಮಟ್ಟದಿಂದ 4408 ಸ್ಕ್ಯಾನಿಂಗ್ ಸೆಂಟರ್‌ಗಳನ್ನು ತಪಾಸಣೆ ನಡೆಸಲಾಗಿದೆ. 2023-24 ನೇ ಸಾಲಿನಲ್ಲಿ 4 ಸ್ಕ್ಯಾನಿಂಗ್ ಸೆಂಟರ್ ಗಳನ್ನು ತಪಾಸಣೆ ನಡೆಸಲಾಗಿದೆ. ರಾಜ್ಯದಿಂದ ತಪಾಸಣೆ ನಡೆಸಿರುವ ಒಟ್ಟು 07 ಸ್ಕ್ಯಾನಿಂಗ್ ಸೆಂಟರ್‌ಗಳ ಮೇಲೆ ನ್ಯಾಯಾಲಯದಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ. ಉಳಿದ 02 ಪ್ರಕರಣಗಳಲ್ಲಿ ಜಿಲ್ಲಾ ಮಟ್ಟದ ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದೆ.<br><br>• ರಾಜ್ಯದಿಂದ "ಬಾಲಿಕಾ" ಆನ್‌ಲೈನ್ ಸಾಫ್ಟ್‌ವೇರ್ ಅನ್ನು ಆವಿಷ್ಕರಿಸಿ ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳು "ಬಾಲಿಕಾ" ಆನ್‌ಲೈನ್ ಸಾಫ್ಟ್‌ವೇರ್ ಮುಖಾಂತರ ಕಡ್ಡಾಯವಾಗಿ ನೋಂದಾಯಿಸಿದ್ದು, ಆನ್ ಲೈನ್ ಮುಖಾಂತರ ಎಫ್-ಫಾರಂಗಳನ್ನು ಸಲ್ಲಿಸಿರುತ್ತವೆ.<br><br>• ತರಬೇತಿ ಹೊಂದಿರದ ಅಥವಾ ತಜ್ಞರಲ್ಲದ ವೈದ್ಯರನ್ನು ನಿಯಂತ್ರಿಸುವ ಸಲುವಾಗಿ ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣ ಲಿಂಗ ಪತ್ತೆ ತಂತ್ರವಿಧಾನಗಳು (ಲಿಂಗ ಆಯ್ಕೆ ನಿಷೇಧ) (ಆರು ತಿಂಗಳ ತರಬೇತಿ) ನಿಯಮಗಳು, 2014ರ ಪ್ರಕಾರ ಎಂ.ಬಿ.ಬಿ.ಎಸ್ |

| | | |
|---|---|---|
| | | ಪದವಿ ಹೊಂದಿ ಸ್ಕ್ಯಾನಿಂಗ್ ಸೆಂಟರ್ ನಡೆಸುತ್ತಿರುವ ವೈದ್ಯರಿಗೆ ಸಾಮರ್ಥ್ಯ ಆಧಾರಿತ ಪರೀಕ್ಷೆ (competency based test)ಮತ್ತು ತರಬೇತಿಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ. ಈಗಾಗಲೇ 198 ವೈದ್ಯರು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುತ್ತಾರೆ.<br><br>• ಅಲ್ಟ್ರಾಸೌಂಡ್ ತಯಾರಕರು, ಮಾರಾಟಗಾರರು, ರಿಪೇರಿ ಮಾಡುವವರನ್ನು ರಾಜ್ಯ ಮಟ್ಟದಲ್ಲಿ ನೋಂದಾಯಿಸಿ, ತ್ರೈಮಾಸಿಕ ವರದಿಯನ್ನು ಪಡೆಯಲಾಗುತ್ತಿದೆ.<br><br>• ಕೇಂದ್ರ ಸರ್ಕಾರದಿಂದ ತರಬೇತಿದಾರರನ್ನು ಕರೆಸಿ ರಾಜ್ಯ ಮಟ್ಟದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಪಿ.ಸಿ& ಪಿ.ಎನ್.ಡಿ.ಟಿ ವಿಷಯ ನಿರ್ವಾಹಕರಿಗೆ ಪಿ.ಸಿ& ಪಿ.ಎನ್.ಡಿ.ಟಿ ಕಾಯ್ದೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ.<br><br>• ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡದಂತೆ ರಾಜ್ಯದ ರೇಡಿಯೋ ಮತ್ತು ಆಡಿಯೋ ಜಿಂಗಲ್ಸ್‌ಗಳ ಮುಖಾಂತರ ಪ್ರಚಾರ ಮಾಡಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಕಾರ್ಯಗಾರ, ಭಿತ್ತಿಪತ್ರ, ಕರಪತ್ರಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.<br><br>• ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುವ ವೈದ್ಯರು, ಸ್ಕ್ಯಾನಿಂಗ್ ಸೆಂಟರ್‌ಗಳು, ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡಲು ಒತ್ತಾಯಿಸುವ ಗರ್ಭಿಣಿ ಸ್ತ್ರೀಯರ ಸಂಬಂಧಿಕರು, ದಲ್ಲಾಳಿಗಳ ವಿರುದ್ಧ ಈಗಾಗಲೇ ಕಠಿಣ ಕ್ರಮಕೈಗೊಂಡಿದ್ದು, ಇನ್ನು ಹೆಚ್ಚಿನ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸಂಶಯಾಸ್ಪದ ವೈದ್ಯರು, ಸ್ಕ್ಯಾನಿಂಗ್ ಸೆಂಟರ್, ಗರ್ಭಿಣಿಯರ ಸಂಬಂಧಿಕರು ಅಥವಾ ದಲ್ಲಾಳಿಗಳ ವಿರುದ್ಧ ಗುಪ್ತಕಾರ್ಯಚರಣೆ ನಡೆಸಿ, ಕ್ರಮ ಕೈಗೊಳ್ಳಲು ಸಹಕರಿಸಲು ಕೋರಿದೆ. ಯಶಸ್ವಿಗೊಂಡ ಪ್ರತಿಯೊಂದು ಗುಪ್ತ ಕಾರ್ಯಾಚರಣೆಗೆ ಸರ್ಕಾರದಿಂದ ರೂ.50.000/-ಗಳ ಬಹುಮಾನ ನೀಡಲು ತೀರ್ಮಾನಿಸಿದ್ದು, ಈ ನಿಟ್ಟಿನಲ್ಲಿ ಹೆಣ್ಣು ಮಕ್ಕಳ ಅನುಪಾತವನ್ನು ಹೆಚ್ಚಿಸಲು ಮತ್ತು ಈ ಮೂಲಕ ಸಮಾಜದ ಸ್ವಾಸ್ತ್ಯಕಾಪಾಡಲು ಶ್ರಮಿಸಲಾಗುತ್ತಿದೆ. |
| ಆ) | ಭ್ರೂಣ ಲಿಂಗ ತಪಾಸಣೆ ಕೇಂದ್ರಗಳಿಗೆ ಇರುವ ಸರ್ಕಾರದ ನಿಯಮಗಳೇನು; (ವಿವರ ನೀಡುವುದು) | ಭ್ರೂಣ ಲಿಂಗ ತಪಾಸಣೆ ಕೇಂದ್ರಗಳು ಈ ಕೆಳಕಂಡ ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆ ಮತ್ತು ನಿಯಮಗಳನ್ನು ಅಳವಡಿಸಿಕೊಳ್ಳಬೇಕಾಗುತ್ತದೆ.<br>• ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಸೆಕ್ಷನ್ 2, 3, 4, 5 ಮತ್ತು 6.<br>• ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಸೆಕ್ಷನ್ 18 ರಲ್ಲಿ ತಿಳಿಸಿರುವಂತೆ ಜಿಲ್ಲಾ ಸಕ್ಷಮ ಪ್ರಾಧಿಕಾರದಲ್ಲಿ ನೋಂದಾಯಿಸ ಬೇಕಾಗಿರುತ್ತದೆ.<br>• ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಸೆಕ್ಷನ್ 19 (3) ಮತ್ತು 19 (4).<br>• ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಸೆಕ್ಷನ್ 29.<br>• ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ರೂಲ್ಸ್ 2, 3, 4, 5 (1), 6, 7, 8, 9, 10, 13 ಮತ್ತು 14. |

| | | |
|---|---|---|
| ಇ) | ಭ್ರೂಣ ಲಿಂಗ ಪತ್ತೆ ಮಾಡುವ ಜಾಲದ ಮೇಲೆ ಕಠಿಣ ಕ್ರಮಗಳನ್ನು ಕೈಗೊಳ್ಳಲು ಆರೋಗ್ಯ ಇಲಾಖೆಯು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಯಾವುದಾದರೂ ಪ್ರತ್ಯೇಕ ತಂಡಗಳನ್ನು ರಚಿಸಲು ಸರ್ಕಾರದ ಮುಂದಿರುವ ಕ್ರಮಗಳಾವುವು? (ಮಾಹಿತಿ ನೀಡುವುದು) | ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯಲ್ಲಿ ಪೋಲೀಸ್ ಇಲಾಖೆಯ ಸಹಕಾರದೊಂದಿಗೆ ತಂಡ ರಚಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಆಕುಕ 69 ಎಸ್.ಟಿ.ಕ್ಯೂ 2023**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.